## ಪ್ರಧಾನ ನ್ಯಾಯಿಕ ದಂಡಾಧಿಕಾರಿ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ ಮಾಗಡಿ

## ಕ್ರಿಮಿನಲ್ ಪ್ರಕರಣ ಸಂಖ್ಯೆ ಃ 3391 / 2022

**ಚಾಸಾ ಃ- 14 / ಪ್ರಾಸಾ ಃ- 5**

| | |
|---|---|
| ಹೆಸರು | ಕೃಷ್ಣಪ್ಪ |
| ತಂದೆಯ ಹೆಸರು | **ವೆಂಕಟರಮಣಯ್ಯ** |
| ವಯಸ್ಸು | **53** |
| ಉದ್ಯೋಗ | **ಎ ಎಸ್ ಐ , ಮಾಗಡಿ ಪೋಲಿಸ್ ಠಾಣೆ** |
| ವಿಳಾಸ | **ಮಾಗಡಿ ಟೌನ್** |

**ದಿನಾಂಕಃ 29.03.2025 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ ಃ- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ ಃ-**

2021 ರಿಂದ ಇಲ್ಲಿಯವರೆಗೆ ಮಾಗಡಿ ಪೋಲಿಸ್ ಠಾಣೆಯಲ್ಲಿ ಎಎಸ್ಐ ಎಂದು ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿನಾಂಕ 03.03.2022 ರಂದು ಮಧ್ಯಾಹ್ನ 3.00 ಗಂಟೆಗೆ ನಾನು ಮಾಗಡಿ ಪೋಲಿಸ್ ಠಾಣಾ ಕರ್ತವ್ಯದಲ್ಲಿದ್ದಾಗ ಚಾಸಾ-1ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಪಡೆದು ಪರಿಶೀಲಿಸಿ ಠಾಣಾ ಮೊಕದ್ದಮೆ ನಂ. 60/2022 ರಂತೆ ಕಲಂ 279, 304ಎ ಐಪಿಸಿ ರೀತ್ಯ ಪ್ರಥಮ ವರ್ತಮಾನ ವರದಿಯನ್ನು ದಾಖಲಿಸಿಕೊಂಡಿರುತ್ತೇನೆ. ಸದರಿ ಪ್ರಥಮವರ್ತಮಾನ ವರಧಿಯನ್ನು ಮಾನ್ಯ ನ್ಯಾಯಾಲಯಕ್ಕೆ ಪಿ.ಸಿ.778 ಚಂದ್ರೇಗೌಡ ರವರ ಮುಖಾಂತರ ಕಳುಹಿಸಿ ಕೊಟ್ಟಿರುತ್ತೇನೆ. ಇನ್ನೊಂದು ಪ್ರತಿಯನ್ನು ನಮ್ಮ ವೇಲಾಧಿಕಾರಿಗಳಿಗೆ ಮೇಲ್ ಮುಖಾಂತರ ಕಳುಹಿಸಿ ಕೊಟ್ಟಿರುತ್ತೇನೆ. ಈಗ ಸಾಕ್ಷಿಗೆ ನಿಪಿ-1ಅನ್ನು ತೋರಿಸಲಾಗಿ ಅದರಲ್ಲಿರುವ ತಮ್ಮ ಸಹಿಯನ್ನು ಗುರುತಿಸಿದ್ದರಿಂದ ಸಾಕ್ಷಿಯಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಈಗ ಸಾಕ್ಷಿಗೆ ಪ್ರಥಮ

ವರ್ತಮಾನ ವರಧಿಯನ್ನು ತೋರಿಸಲಾಗಿ ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಪ್ರಥಮ ವರ್ತಮಾನ ವರಧಿಯನ್ನು ನಿಪಿ-8 ಎಂದು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-8(ಎ) ಎಂದು ಗುರುತಿಸಲಾಯಿತು.

ನಂತರ ಅದೇ ದಿನ ಮಧ್ಯಾಹ್ನ 3.50 ಗಂಟೆಗೆ ಮಾಗಡಿಯು ಸರ್ಕಾರಿ ಆಸ್ಪತ್ರೆಯ ಶವಾಗಾರಕ್ಕೆ ಬೇಟಿ ನೀಡಿ ಚಾಸಾ-6 ರಿಂದ 8 ರವರಿಗೆ ನೋಟೀಸ್ ಜಾರಿ ಮಾಡಿ ಶವತನಿಖಾ ವರಧಿಯನ್ನು ಮಧ್ಯಹ್ನ 3.50 ರಿಂದ ಸಂಜೆ 5.50 ಗಂಟೆಯವರೆಗೆ ಜರುಗಿಸಿರುತ್ತೇನೆ. ಈಗ ಸಾಕ್ಷಿಗೆ ಶವತನಿಖಾ ವರಧಿಯನ್ನು ತೋರಿಸಲಾಗಿ ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಶವತನಿಖಾ ವರಧಿಯನ್ನು ನಿಪಿ-9 ಎಂದು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-9(ಎ) ಎಂದು ಗುರುತಿಸಲಾಯಿತು.

ದಿನಾಂಕ 04.03.2022 ರಂದು ಸ್ಥಳ ಪರಿಶೀಲನೆಗಾಗಿ ಸ್ಥಳಕ್ಕೆ ಹೋಗಿ ಚಾಸಾ -2 ರಿಂದ 4 ರವರ ಸಮಕ್ಷಮ ಮಧ್ಯಾಹ್ನ 1.00 ರಿಂದ 1.30 ಗಂಟೆಯವರೆಗ ಕೃತ್ಯ ನಡೆದ ಸ್ಥಳದ ಪಂಚನಾಮೆಯನ್ನು ಜರುಗಿಸಿರುತ್ತೇನೆ. ಪಂಚನಾಮೆಯ ಸಮಯದಲ್ಲಿ ಚಾಸ 2ರವರು ಅಪಘಾತಪಡಿಸಿದ ಕೆಎ 42 ಎಫ್ 1711ಬಸ್ ಹಾಗೂ ಅಪಘಾತಕ್ಕೀಡಾದ ಟಿ ವಿ ಎಸ್ ಎಕ್ಸ್ ಎಲ್ ಕೆಎ 41ಇಎಫ್ 8627 ಅನ್ನು ಅಮಾನತು ಪಡಿಸಿಕೊಂಡಿರುತ್ತೇನೆ. ಈಗ ಸಾಕ್ಷಿಗೆ ನಿಪಿ-2 ಅನ್ನು ತೋರಿಸಲಾಗಿ ಅದರಲ್ಲಿರುವ ತಮ್ಮ ಸಹಿಯನ್ನು ಗುರುತಿಸಿದ್ದರಿಂದ ಸಾಕ್ಷಿಯ ಸಹಿಯನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು. ಸ್ಥ,ಳದಲ್ಲಿ ಕಚ್ಛಾ ನಕಾಶೆಯನ್ನು ತಯಾರಿಸಿರುತ್ತೇನೆ. ಈಗ ಸಾಕ್ಷಿಗೆ ಕಚ್ಛಾ ನಕಾಶೆಯನ್ನು ತೋರಿಸಲಾಗಿ ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಕಚ್ಛಾ ನಕಾಶೆಯನ್ನು ನು ನಿಪಿ-10 ಎಂದು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-10(ಎ) ಎಂದು ಗುರುತಿಸಲಾಯಿತು. ನಂತರ ಪ್ರಕರಣವು ಘೋರ ರಅಪರಾಧವಾದ್ದರಿಂದ ಪ್ರಕರಣದ ಮುಂದಿನ ತನಿಖೆಗಾಗಿ ಚಾಸಾ 15 ರವರಿಗೆ ಕಡತವನ್ನು ವಹಿಸಿಕೊಟ್ಟಿರುತ್ತೇನೆ.

**ಪಾಟೀಸವಾಲುಃ ಆರೋಪಿತರ ಪರ ಶ್ರೀ ಆರ್ ಎಸ್ ವಕೀಲರಿಂದಃ**

ದ್ವಿಚಕ್ರ ಸವಾರನ ಅತಿವೇಗ ಮತ್ತು ಅಜಾಗರೂಕತೆಯಿಂದ ಅಪಘಾತ ಆಗಿದ್ದರೂ ಮೃತನ ಕುಟುಂಬಕ್ಕೆ ಸಹಾಯ ಮಾಡಲು ಒಂದು ಸುಳ್ಳು ಎಫ್ ಐ ಆರ್ ಅನ್ನು ದಾಖಲಿಸಿರುತ್ತೀರಿ ಎಂದರೆ ಸಾಕ್ಷಿ ಸುಳ್ಳು ಎಂದು ನುಡಿಯುತ್ತಾರೆ. ಮಹಜರ್ ಪಂಚರಿಗೆ ನೋಟೀಸ್ ಕೊಟ್ಟಿರುತ್ತೀರಾ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ನೀವು ಸ್ಥಳಕ್ಕೆ ಬೇಟಿ ನೀಡಿರುವುದಿಲ್ಲ ಮಹಜರನ್ನು ಠಾಣೆಯಲ್ಲೆ ತಯಾರಿಸಿ ಸಾಕ್ಷಿಗಳ ಸಹಿ ಪಡೆದಿರುತ್ತೀರಿ ಎಂದರೆ ಸಾಕ್ಷಿ ಸುಳ್ಳು ಎಂದು ನುಡಿಯುತ್ತಾರೆ. ಅದೇ ರೀತಿ ಮೃತನ ಕುಟುಂಬಕ್ಕೆ ಸಹಾಯ ಮಾಡಲು ಕಚ್ಚಾ ನಕಾಶೆಯನ್ನು ಠಾಣೆಯಲ್ಲೆ ತಯಾರಿಸಿರುತ್ತೀರಿ ಎಂದರೆ ಸಾಕ್ಷಿ ಸುಳ್ಳು ಎಂದು ನುಡಿಯುತ್ತಾರೆ.

**ಮರು ವಿಚಾರಣೆ ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಒಪ್ಪಿರುತ್ತಾರೆ,**

**ಪ್ರ. ನ್ಯಾ . ದಂ. ಮತ್ತು ಜೆ. ಎಂ. ಎಫ್. ಸಿ.**
**ಮಾಗಡಿ.**